ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 15-11-2016

## ಪತ್ರಿಕಾ ಆಮಂತ್ರಣ

1. "ತುರ್ತು ಸೇವೆಗೆ ಪ್ರಥಮ ಪ್ರತಿಕ್ರಿಯೆಯ ತರಬೇತಿ ಕಾರ್ಯಕ್ರಮದ ಪ್ರಾರಂಭೋತ್ಸವ"
   ಮುಖ್ಯ ಅತಿಥಿ:
   ಕೆ.ಆರ್. ರಮೇಶ್‌ಕುಮಾರ್,
   ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.
   ದಿನಾಂಕ : 16-11-2016, ಬುಧವಾರ, ಸಮಯ ಬೆಳಿಗ್ಗೆ 9-30 ಗಂಟೆಗೆ
   ಸ್ಥಳ: ಕೊಠಡಿ ಸಂಖ್ಯೆ 419, ವಿಕಾಸಸೌಧ, ಬೆಂಗಳೂರು – 560 001
2. ವಾಹನಗಳ ವಾಯುಮಾಲಿನ್ಯ ಮಾಪನ ಮಾಡುವ ನೂತನ ಸಂಚಾರಿ ವಾಹನಗಳ
   ಉದ್ಘಾಟನೆ: ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.
   ಘನ ಉಪಸ್ಥಿತಿ:
   ಬಿ. ರಮಾನಾಥ ರೈ, ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು.
   ಅಧ್ಯಕ್ಷತೆ:
   ಆರ್. ರೋಷನ್ ಬೇಗ್, ನಗರಾಭಿವೃದ್ಧಿ ಮತ್ತು ಹಜ್ ಹಾಗೂ ವಕ್ಫ್ ಸಚಿವರು.
   ದಿನಾಂಕ : 16-11-2016, ಬುಧವಾರ, ಸಮಯ ಬೆಳಿಗ್ಗೆ 9-30 ಗಂಟೆಗೆ
   ಸ್ಥಳ: ವಿಧಾನಸೌಧ ಮುಂಭಾಗ, ಬೆಂಗಳೂರು.

3. "ಹವಾಮಾನ ಬದಲಾವಣೆ ಹಿನ್ನೆಲೆಯಲ್ಲಿ ರಾಜ್ಯದ ದೇಶೀಯ ಜಾನುವಾರುಗಳ ಸಂರಕ್ಷಣೆ ಮತ್ತು ನಿರ್ವಹಣೆ" ಉಪಕ್ರಮ ಕಾರ್ಯಾಗಾರ
ಉದ್ಘಾಟನೆ: ಎ. ಮಂಜು, ಪಶುಸಂಗೋಪನೆ ಮತ್ತು ರೇಷ್ಮೆ ಖಾತೆ ಸಚಿವರು.
ದಿನಾಂಕ: 16-11-2016, ಬುಧವಾರ, ಸಮಯ ಬೆಳಿಗ್ಗೆ 10-00 ಗಂಟೆಗೆ

**ಸ್ಥಳ: ಕರ್ನಾಟಕ ಪಶುವೈದ್ಯಕೀಯ ಪರಿಷತ್ತಿನ ಸಭಾಂಗಣ, ಹೆಬ್ಬಾಳ, ಬೆಂಗಳೂರು – 560 024.**

**4. ಪತ್ರಿಕಾಗೋಷ್ಠಿ:**

**ಎಂ.ಆರ್. ಸೀತಾರಾಮ್,**
**ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.**
**ದಿನಾಂಕ: 16-11-2016 ರ ಬುಧವಾರ, ಸಮಯ: ಬೆಳಿಗ್ಗೆ 11.30 ಗಂಟೆಗೆ**
**ಸ್ಥಳ: ಸಮಿತಿ ಕೊಠಡಿ ಸಂಖ್ಯೆ: 313, 3ನೇ ಮಹಡಿ, ವಿಧಾನಸೌಧ, ಬೆಂಗಳೂರು.**

**5. ಪತ್ರಿಕಾಗೋಷ್ಠಿ:**

**ಈಶ್ವರ ಬಿ. ಖಂಡ್ರೆ,**
**ಪೌರಾಡಳಿತ ಮತ್ತು ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು**
**ದಿನಾಂಕ: 16-11-2016 ರ ಬುಧವಾರ, ಸಮಯ: ಮಧ್ಯಾಹ್ನ 12.30 ಗಂಟೆಗೆ**
**ಸ್ಥಳ: ಕೊಠಡಿ ಸಂಖ್ಯೆ 442, ವಿಕಾಸಸೌಧ, ಬೆಂಗಳೂರು.**

## ಪತ್ರಿಕಾ ಪ್ರಕಟಣೆ

## ಪುಸ್ತಕ ಸಂಸ್ಕೃತಿಯನ್ನು ಜನಮಾನಸದಲ್ಲಿ ಶ್ರೀಮಂತಗೊಳಿಸಬೇಕಿದೆ

**– ಶೂದ್ರ ಶ್ರೀನಿವಾಸ್**

ಬೆಂಗಳೂರು, ನ. 15:

ಜಗತ್ತಿನಲ್ಲಿ ಇಂದು ಒಂದಷ್ಟು ಶಿಸ್ತು, ನೈತಿಕತೆ ಇದೆ ಎಂದಾದಲ್ಲಿ ಅದು ಪುಸ್ತಕ ಸಂಸ್ಕೃತಿಯ ಮೂಲಕ ಮಾತ್ರ. ನಮ್ಮತನವನ್ನು ಕಳೆದುಕೊಳ್ಳುತ್ತಿರುವ ಈ ಸಂದರ್ಭದಲ್ಲಿ ನಮ್ಮನ್ನು ನಾವು ಕಂಡುಕೊಳ್ಳಲು ಅಮೂಲ್ಯ ಕೃತಿಗಳು ಇಂದು ನಮಗೆ ನೆರವಾಗುತ್ತಿವೆ ಎಂದು ಖ್ಯಾತ ಸಾಹಿತಿ ಹಾಗೂ ರಾಜ್ಯ ಗ್ರಂಥಾಲಯ ಪ್ರಾಧಿಕಾರದ ಸದಸ್ಯರಾದ ಶೂದ್ರ ಶ್ರೀನಿವಾಸ್ ಅವರು ಅಭಿಪ್ರಾಯಪಟ್ಟರು.

ಸಾರ್ವಜನಿಕ ಗ್ರಂಥಾಲಯ ಇಲಾಖೆಯು ಇಂದು ನಗರದ ಕಬ್ಬನ್ ಉದ್ಯಾನವನದ ರಾಜ್ಯ ಮಕ್ಕಳ ಗ್ರಂಥಾಲಯ ಆವರಣದಲ್ಲಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ–2016 ರ ಅಂಗವಾಗಿ ಏರ್ಪಡಿಸಿದ್ದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಉದ್ಘಾಟನಾ ಭಾಷಣ ಮಾಡುತ್ತಾ ಮಾತನ್ನಾಡಿದ ಅವರು, ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ–2016 ರ ಮೂಲಕ ಪುಸ್ತಕ ಸಂಸ್ಕೃತಿಯನ್ನು ಜನಮಾನಸದಲ್ಲಿ ಶ್ರೀಮಂತಗೊಳಿಸಲು ಪ್ರಯತ್ನಿಸಲಾಗುತ್ತಿದೆ ಎಂದರು.

ಮಹಾತ್ಮಾ ಗಾಂಧೀಜಿಯವರು ಸಹ ಅತ್ಯುತ್ತಮ ಕೃತಿಗಳಿಂದ ಪ್ರೇರಿತರಾಗಿದ್ದರು. ಜಗತ್ತಿನ ಎಲ್ಲ ದೊಡ್ಡ ಚಿಂತಕರನ್ನು ಉತ್ತಮ ಕೃತಿಗಳು ಕಾಡಿವೆ. ಇಂದಿಗೂ ಕೂಡ ನಮ್ಮ ಮಹಾಕಾವ್ಯಗಳಾದ ರಾಮಾಯಣ ಮತ್ತು ಮಹಾಭಾರತವನ್ನು ನಮ್ಮ ಹಳ್ಳಿಗಾಡಿನ ಅನಕ್ಷರಸ್ಥ ಜನರು ಕೇಳಿಸಿಕೊಳ್ಳುವ ಮೂಲಕ ತಮ್ಮ ನೈತಿಕ ಪ್ರಜ್ಞೆಯನ್ನು ಹೆಚ್ಚಿಸಿಕೊಳ್ಳುತ್ತಿದ್ದಾರೆ. ಸಾಂಸ್ಕೃತಿಕವಾಗಿ ನಾವು ಜಗತ್ತಿನ ಉದ್ದಗಲಕ್ಕೂ ಸಾಕಷ್ಟು ಬೆಳೆದಿದ್ದೇವೆ. ಪ್ರತಿದಿನ ನಮ್ಮ ಲಕ್ಷಾಂತರ ಕೃತಿಗಳು ಬೇರೆ ಬೇರೆ ರೂಪದಲ್ಲಿ ಜಗತ್ತಿನಾದ್ಯಂತ ಪ್ರಕಟಗೊಳ್ಳುತ್ತಿವೆ ಎಂದರು.

ಮನುಷ್ಯನಿಗೆ ಓದಿನ ಬಗೆಗಿನ ದಾಹ ಕೇವಲ ಕಾದಂಬರಿ ಕಥೆಗೆ ಸೀಮಿತವಾಗಿಲ್ಲ. ವಿಜ್ಞಾನ, ಇತಿಹಾಸ, ಸಮಾಜಶಾಸ್ತ್ರಕ್ಕೆ ಸಂಬಂಧಿಸಿದಂತೆ ಅರಿವನ್ನು, ಜ್ಞಾನವನ್ನು ನಮ್ಮೊಳಗೆ ಹೆಚ್ಚಿಸಿಕೊಳ್ಳುತ್ತಿದ್ದೇವೆ. ಈ ಪ್ರಯತ್ನದ ಮುಂದುವರೆದ ಭಾಗವೇ ಕರ್ನಾಟಕದಲ್ಲಿ ಮತ್ತು ರಾಷ್ಟ್ರಿಯ ಮಟ್ಟದಲ್ಲಿ ಗ್ರಂಥಾಲಯ ಸಪ್ತಾಹ ಆಚರಣೆ. ಈ ಮೂಲಕ ನಾವು ಮತ್ತೆ ಮತ್ತೆ ಕೃತಿಗಳ ಮೊರೆ ಹೋಗಲೇಬೇಕಾಗಿದೆ ಎಂದರು.

ಅಮೂಲ್ಯ ಗ್ರಂಥ ಭಂಡಾರಗಳು ನಮ್ಮ ಯುವಜನಾಂಗವನ್ನು ಮತ್ತು ನಮ್ಮ ಶಿಕ್ಷಣ ವ್ಯವಸ್ಥೆಯನ್ನು ಕಾಪಾಡುತ್ತಿವೆ ಎಂದರೆ ತಪ್ಪಾಗಲಾರದು. ಕಾಲೇಜಿನಲ್ಲಾಗಲೀ ಅಥವಾ ಪ್ರಾಥಮಿಕ ಶಾಲೆಯಲ್ಲಾಗಲೀ ಉಪನ್ಯಾಸಕ ಅಥವಾ ಶಿಕ್ಷಕ ತನ್ನಲ್ಲಿ ಜ್ಞಾನವನ್ನು ತುಂಬಿಕೊಳ್ಳದಿದ್ದಲ್ಲಿ ಆತ ಮಕ್ಕಳ ಎದುರು ನಿಲ್ಲಲಾರ. ಅದೇ ರೀತಿ ಸಮಾಜದ ನಾವೆಲ್ಲರೂ ಕೂಡ ಒಂದು ರೀತಿ ವಿದ್ಯಾರ್ಥಿಗಳಿದ್ದ ಹಾಗೆ. ಪ್ರತಿದಿನ ಒಂದಲ್ಲಾ ಒಂದು ವಿಷಯವನ್ನು ಕಲ್ಲಿಯುತ್ತಲೇ ಇರುತ್ತೇವೆ. ನಾಕರೀಕತೆಗೆ ಏನಾದರೂ ಅರ್ಥಪೂರ್ಣತೆ ಇದೆ ಎಂದರೆ ಅದು ಪುಸ್ತಕ ಸಂಸ್ಕೃತಿಯಿಂದ ಮಾತ್ರ ಎಂದರು.

ನಮ್ಮ ದಿನನಿತ್ಯದ ಬದುಕಿನಲ್ಲಿ ನಮ್ಮ ಮುಂದೆ ಬಂದು ನಿಲ್ಲುವ ಅನೇಕ ಪ್ರಸಂಗಗಳನ್ನು ಸ್ವೀಕರಿಸುವ, ಗ್ರಹಿಸುವ ಮನಸ್ಥಿತಿ ನಮಗೆ ಪುಸ್ತಕ ವ್ಯಾಮೋಹದಿಂದ ದೊರಕುತ್ತದೆ.. ಪುಸ್ತಕದ ಮೇಲಿನ ವ್ಯಾಮೋಹ, ಗ್ರಹಿಕೆ, ಅನ್ಯನತೆಯನ್ನು ವಿಸ್ತರಿಸಲು ಗ್ರಂಥಾಲಯ ಇಲಾಖೆ ಗ್ರಂಥಾಲಯ ಸಪ್ತಾಹ ಹಮ್ಮಿಕೊಳ್ಳುತ್ತಿದೆ ಎಂದರು.

ನಗರ ಕೇಂದ್ರ ಮುಖ್ಯ ಗ್ರಂಥಾಲಯಾಧಿಕಾರಿ ದಿವಾಕರ್ ಅವರು ಮಾತನಾಡಿ, ಪುಸ್ತಕಗಳನ್ನು ನಾವುಗಳು ಹೆಚ್ಚು ಹೆಚ್ಚು ಓದಿದಾಗ ಮನಸ್ಸು ಅರಳುತ್ತದೆ ಎಂದ ಅವರು, ಮಾನವ ಬದುಕಿನಲ್ಲಿ ಎತ್ತರದ ಸ್ಥಾನಕ್ಕೇರಬೇಕಾದರೆ ದಿನನಿತ್ಯ ಕಲಿಯಬೇಕಾಗುತ್ತದೆ. ಹಾಗಾಗಿ ಕಲಿಕೆ ನಿರಂತರ ಎಂದರು.

ಸಾರ್ವಜನಿಕ ಗ್ರಂಥಾಲಯ ಇಲಾಖೆ ನಿರ್ದೇಶಕರಾದ ಡಾ. ಸತೀಶ್‌ಕುಮಾರ್ ಎಸ್. ಹೊಸಮನಿ ಅವರು ಮಾತನಾಡಿ, ಮಕ್ಕಳು, ಹಿರಿಯರು, ಮಹಿಳೆಯರನ್ನು ಹೆಚ್ಚು ಹೆಚ್ಚು ಗ್ರಂಥಾಲಯಕ್ಕೆ ಸೆಳೆಯಲು ರಾಜ್ಯದ ಎಲ್ಲಾ ಜಿಲ್ಲಾ, ನಗರ ಮತ್ತು ಗ್ರಾಮ ಪಂಚಾಯಿತಿ ಮಟ್ಟದ ಗ್ರಂಥಾಲಯಗಲಲ್ಲಿ ಸದಸ್ಯತ್ವ ನೋಂದಣಿ ಅಭಿಯಾನ ಸೇರಿದಂತೆ ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ರಾಜ್ಯ ಗ್ರಂಥಾಲಯಕ್ಕೆ 100 ವರ್ಷ ತುಂಬಿದ ಹಿನ್ನಲೆಯಲ್ಲಿ ಶೀಘ್ರದಲ್ಲೇ ಶತಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಅವರು ಈ ಸಂದರ್ಭದಲ್ಲಿ ತಿಳಿಸಿದರು.

ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಅಂಗವಾಗಿ ಶಾಲಾವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ಪ್ರಬಂಧ ಸ್ಪರ್ಧೆ, ರಸಪ್ರಶ್ನೆ ಸ್ಪರ್ಧೆ, ಚಿತ್ರಕಲೆ, ಆಶುಭಾಷಣ, ರಂಗೋಲಿ, ಭಾವಗೀತೆ/ಜನಪದ ಗೀತೆ ಸ್ಪರ್ಧೆಗಳಲ್ಲಿ ಬಹುಮಾನ ಗಳಿಸಿದ ವಿದ್ಯಾರ್ಥಿಗಳಿಗೆ ಈ ಸಂದರ್ಭ ಬಹುಮಾನ ವಿತರಿಸಲಾಯಿತು. ಅಂತೆಯೇ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ಇಲಾಖೆಯ ಸಿಬ್ಬಂದಿ ವರ್ಗದವರಿಗೆ ಬಹುಮಾನ ವಿತರಿಸಲಾಯಿತು. ಪ್ರತಿದಿನ ಗ್ರಂಥಾಲಯಕ್ಕೆ ಆಗಮಿಸಿ ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಂಡಿರುವ ಆರು ಮಂಂದಿ ನಾಗರೀಕರಿಗೆ 'ಉತ್ತಮ ಓದುಗ' ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಸಾರ್ವಜನಿಕ ಗ್ರಂಥಾಲಯ ಇಲಾಖೆ ವಿಶ್ರಾಂತ ನಿರ್ದೇಶಕರಾದ ಡಾ.ಪಿ.ವೈ.ರಾಜೇಂದ್ರಕುಮಾರ್,ಕೆ.ಜಿ.ವೆಂಕಟೇಶ್, ಆರ್.ಕೆ.ಬಡಿಗಣ್ಣವರ, ಉಪನಿರ್ದೇಶಕರಾದ ಸರೋಜಮ್ಮ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಎಸ್.ಎಂ/ಎಂ.ಆರ್.ಎಂ

## ಕನ್ನಡ ಭಾಷೆ ಪರೀಕ್ಷೆ –
## ಅರ್ಹತಾ ಅಭ್ಯರ್ಥಿಗಳ ಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗದ ಗ್ರೂಪ್ 'ಸಿ' ತಾಂತ್ರಿಕೇತರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ: 10–9–2016 ರಂದು ನಡೆಸಲಾದ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ನೋಂದಣಿ ಸಂಖ್ಯೆಗಳ ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂತರ್ಜಾಲ "http://kpsc.kar.nic.in/Result" ನಲ್ಲಿ ಪ್ರಕಟಿಸಲಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಸ್ಪರ್ಧಾತ್ಮಕ ಪರೀಕ್ಷೆ – ಕೀ ಉತ್ತರ ಪ್ರಕಟ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯಗಳಲ್ಲಿ ವೈಜ್ಞಾನಿಕ ಅಧಿಕಾರಿ (ರಸಾಯನಿಕ/ಮನೋವಿಜ್ಞಾನ ವಿಭಾಗ) ತಾಂತ್ರಿಕ ಹುದ್ದೆಗಳ ನೇಮಕಾತಿಗಾಗಿ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಯ ಕೀ ಉತ್ತರಗಳನ್ನು ಆಯೋಗದ ಅಂತರ್ಜಾಲದಲ್ಲಿ "http://kpsc.kar.nic.in/Key Answers" ನಲ್ಲಿ ಪ್ರಕಟಿಸಿದೆ.

ಈ ಕೀ ಉತ್ತರಗಳ ಕುರಿತು ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಅದನ್ನು ಪುಷ್ಠೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ವಿಷಯ, ಪ್ರಶ್ನೆ ಪುಸ್ತಿಕೆಯ ಶ್ರೇಣಿ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಗಳು ಹಾಗೂ ಪ್ರತಿ ಪ್ರಶ್ನೆಗೆ ರೂ 50/– ಶುಲ್ಕದೊಂದಿಗೆ (ಐಪಿಒ/ಡಿಡಿ ಮೂಲಕ) ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ದಿನಾಂಕ: 21–11–2016 ರ ಒಳಗಾಗಿ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಸಂತ ಶ್ರೇಷ್ಠ ಕನಕದಾಸರ ಜಯಂತಿ – 2016

**'ಕನಕ ಶ್ರೀ' ಪ್ರಶಸ್ತಿ, 'ಕನಕ ಗೌರವ' ಹಾಗೂ 'ಕನಕ ಯುವ ಪುರಸ್ಕಾರ' ಪ್ರದಾನ ಸಮಾರಂಭ**

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಸಂತ ಶ್ರೇಷ್ಠ ಕನಕದಾಸರ ಜಯಂತಿ – 2016 ಹಾಗು 'ಕನಕ ಶ್ರೀ' ಪ್ರಶಸ್ತಿ, 'ಕನಕ ಗೌರವ' ಹಾಗೂ 'ಕನಕ ಯುವ ಪುರಸ್ಕಾರ' ಪ್ರದಾನ ಸಮಾರಂಭವನ್ನು ನವೆಂಬರ್ 17 ರಂದು ಬೆಳಿಗ್ಗೆ 11.30 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದು ಸಮಾರಂಭದ ಉದ್ಘಾಟನೆ ಹಾಗೂ ಪ್ರಶಸ್ತಿ ಪ್ರದಾನ ಮಾಡುವರು. 2016ನೇ ಸಾಲಿನ ಕನಕಶ್ರೀ ಪ್ರಶಸ್ತಿಗೆ ಸಿದ್ದಣ್ಣ ಫಕೀರಪ್ಪ ಜಕಬಾಳ ಅವರನ್ನು ಆಯ್ಕೆ ಮಾಡಲಾಗಿದೆ.

ಸಮಾರಂಭದಲ್ಲಿ ಕೇಂದ್ರ ರಾಸಾಯನಿಕ ಹಾಗೂ ರಸಗೊಬ್ಬರ ಮತ್ತು ಸಂಸದೀಯ ವ್ಯವಹಾರಗಳ ಸಚಿವ ಅನಂತಕುಮಾರ್, ಬೆಂಗಳೂರು ನಗರ ಅಭಿವೃದ್ಧಿ ಮತ್ತು ನಗರ ಯೋಜನಾ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವೆ ಶ್ರೀಮತಿ ಉಮಾಶ್ರೀ, ಅಬಕಾರಿ ಸಚಿವ ಹೆಚ್. ವೈ. ಮೇಟಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ ಹಾಗೂ ಪುತ್ತೂರು ವಿಧಾನಸಭಾ ಕ್ಷೇತ್ರ ಹಾಗೂ ಸಂಸದೀಯ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದಾರೆ.

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಆರ್. ವಿ. ದೇಶಪಾಂಡೆ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

## ಮನೆಯಂಗಳದಲ್ಲಿ ಮಾತುಕತೆ :

### ತಿಂಗಳ ಅತಿಥಿಯಾಗಿ ಹಿರಿಯ ರಂಗಕರ್ಮಿ ಲಕ್ಷ್ಮೀ ಚಂದ್ರಶೇಖರ್

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ನವೆಂಬರ್ 19 ರ ಶನಿವಾರ ಸಂಜೆ 4-00 ಗಂಟೆಗೆ ನಗರದ ಜೆ.ಸಿ. ರಸ್ತೆಯಲ್ಲಿರುವ ಕನ್ನಡ ಭವನದ ನಯನ ಸಭಾಂಗಣದಲ್ಲಿ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮದಲ್ಲಿ ತಿಂಗಳ ಅತಿಥಿಯಾಗಿ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮದಲ್ಲಿ ಹಿರಿಯ ರಂಗಕರ್ಮಿ ಶ್ರೀಮತಿ ಲಕ್ಷ್ಮೀ ಚಂದ್ರಶೇಖರ್ ಅವರು ಪಾಲ್ಗೊಳ್ಳಲಿದ್ದಾರೆ.

ಅಂದು ಮಧ್ಯಾಹ್ನ 3-00 ಗಂಟೆಗೆ ಚಿಂತಲಪಲ್ಲಿ ವಿ. ಶ್ರೀನಿವಾಸ್ ಮತ್ತು ವೃಂದದವರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದು ಇಲಾಖೆಯ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಸಾರಿಗೆ ಅದಾಲತ್

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಕಚೇರಿ, ಬೆಂಗಳೂರು (ದಕ್ಷಿಣ) ಜಯನಗರದಲ್ಲಿ ನವೆಂಬರ್ 18 ರಂದು ಮಧ್ಯಾಹ್ನ 3-00 ಗಂಟೆಗೆ ಸಾರಿಗೆ ಅದಾಲತ್‌ನ್ನು ಕಚೇರಿಯ 2ನೇ ಮಹಡಿಯ ಆಡಿಟೋರಿಯಂನಲ್ಲಿ ಏರ್ಪಡಿಸಲಾಗಿದೆ.

ಅದಾಲತ್‌ನಲ್ಲಿ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದು ಸಾರ್ವಜನಿಕರು ತಮ್ಮ ಅಹವಾಲು ಹಾಗೂ ಕುಂದುಕೊರತೆಗಳಿಗೆ ಪರಿಹಾರವನ್ನು ಕಂಡುಕೊಳ್ಳಬಹುದಾಗಿದೆ ಎಂದು ಇಲಾಖೆಯ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಹೈನುಗಾರಿಕೆ ಹಾಗೂ ಮೇವು ಉತ್ಪಾದನೆ ಕುರಿತು ತರಬೇತಿ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ರಾಜ್ಯ ಜಾನುವಾರು ಸಂವರ್ಧನಾ ಮತ್ತು ತರಬೇತಿ ಕೇಂದ್ರ, ಹೆಸರಘಟ್ಟದಲ್ಲಿ ನವೆಂಬರ್ 21 ರಿಂದ 26 ರವರೆಗೆ ಹೈನುಗಾರಿಕೆ ಪ್ರಾರಂಭಿಸಲು ಆಸಕ್ತಿಯುಳ್ಳ ರೈತರಿಗೆ, ರೈತ ಮಕ್ಕಳಿಗೆ ಹಾಗೂ ರೈತ ಮಹಿಳೆಯರಿಗೆ 6 ದಿನಗಳ "ಹೈನುಗಾರಿಕೆ ಹಾಗೂ ಮೇವು ಉತ್ಪಾದನೆ" ಕುರಿತು ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ತರಬೇತಿಯ ಅವಧಿಯಲ್ಲಿ ವಸತಿ ವ್ಯವಸ್ಥೆ ಇದ್ದು ಒಂದು ದಿನಕ್ಕೆ 25 ರೂ. ವಸತಿ ಶುಲ್ಕ ಪಾವತಿಸಬೇಕು. ತರಬೇತಿ ಪಡೆಯಲು ಇಚ್ಛಿಸುವವರು ವಾಸಸ್ಥಳದ ಯಾವುದಾದರೊಂದು ದೃಢೀಕರಣದ ಪ್ರತಿ ಹಾಗೂ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ನವೆಂಬರ್ 21 ರ ಬೆಳಿಗ್ಗೆ 9–00 ಗಂಟೆ ಒಳಗಾಗಿ ನೇರವಾಗಿ ತರಬೇತಿಗೆ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಉಪ ನಿರ್ದೇಶಕರು (ತರಬೇತಿ) ಇವರನ್ನು ನೇರವಾಗಿ ಅಥವಾ ದೂರವಾಣಿ ಮುಖೇನ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. ಕಚೇರಿ ದೂರವಾಣಿ ಸಂಖ್ಯೆ 080 28466397.

ಎಸ್‌ಎಂ:ಜೆಡಿ:ಜಿಪಿಆರ್.

## ನಾಲ್ಕು ತಿಂಗಳ ಗ್ರಂಥಾಲಯ ತರಬೇತಿ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಸಾರ್ವಜನಿಕ ಗ್ರಂಥಾಲಯ ಇಲಾಖೆಯು ರಾಜ್ಯದ ನಾಲ್ಕು ಕಂದಾಯ ವಿಭಾಗಳಾದ ಬೆಂಗಳೂರು, ಮೈಸೂರು ವಿಭಾಗದ ಮಂಗಳೂರು, ಬೆಳಗಾವಿ ವಿಭಾಗದ ಧಾರವಾಡ ಮತ್ತು ಕಲಬುರುಗಿ ವಿಭಾಗಗಳಲ್ಲಿ ನಾಲ್ಕು ತಿಂಗಳ ಅವಧಿಯ ಗ್ರಂಥಾಲಯ ವಿಜ್ಞಾನ ತರಬೇತಿ ಶಾಲೆಗಳನ್ನು ನಡೆಸುತ್ತಿದೆ. ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನಿಷ್ಠ ಶೇಕಡ 40 ರಷ್ಟು, ಎಸ್.ಸಿ./ಎಸ್.ಟಿ.ಗೆ ಶೇಕಡ 35 ರಷ್ಟು ಅಂಕ ಪಡೆದ ಅಭ್ಯರ್ಥಿಗಳು ಈ ತರಬೇತಿಗೆ ಅರ್ಹರಾಗಿದ್ದಾರೆ.

ಹಾಲಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಾಲಯ ಸಹವರ್ತಿಗಳು, ಗ್ರಾಮ ಪಂಚಾಯತಿ ಮೇಲ್ವಿಚಾರಕರು, ಸಂಬಂಧಪಟ್ಟ ಉಪ ನಿರ್ದೇಶಕರು /ಮುಖ್ಯ ಗ್ರಂಥಾಲಯಾಧಿಕಾರಿಗಳ 'ಮೂಲಕ ಹಾಗೂ ಇತರೆ ಶೈಕ್ಷಣಿಕ ಸಂಸ್ಥೆಯಿಂದ ಬರುವ ಅಭ್ಯರ್ಥಿಗಳು ತಮ್ಮ ಸಂಸ್ಥೆಯ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸಬೇಕು.

ಅರ್ಜಿ ಜೊತೆಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಸೇವೆಗೆ ಸೇರಿದ ದಿನಾಂಕ, ವೇತನ ಪ್ರಮಾಣ ಪತ್ರ ನಡವಳಿಕೆ ಪ್ರಮಾಣ ಪತ್ರಗಳ ನಕಲು ಪ್ರತಿಗಳನ್ನು ಲಗತ್ತಿಸಬೇಕು.

20 ಸೀಟುಗಳನ್ನು ಶ್ರೇಷ್ಠತೆಯ ಮೀಸಲಾತಿಯ ಆಧಾರದ ಮೇಲೆ ಆದ್ಯತೆ ನೀಡಲಾಗುವುದು. ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಜಾತಿ, ಗ್ರಾಮೀಣ/ಉಓಜನಾ ನಿರಾಶ್ರಿತರು/ಮಾಜಿ ಸೈನಿಕ/ಅಂಗವಿಕಲ/ಕನ್ನಡ ಮಾಧ್ಯಮ ಪ್ರಮಾಣ ಪತ್ರಗಳ ದೃಢೀಕೃತ ನಕಲು ಪ್ರತಿಗಳನ್ನು ಸಲ್ಲಿಸಬೇಕು. ಅರ್ಜಿಗಳನ್ನು ಸಲ್ಲಿಸಲು ಡಿಸೆಂಬರ್ 10 ಕೊನೆಯ ದಿನವಾಗಿರುತ್ತದೆ.

ಉಪ ನಿರ್ದೇಶಕರ ಕಚೇರಿ, ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು – 1 ದೂರವಾಣಿ ಸಂಖ್ಯೆ 080–22212128, ಉಪ ನಿರ್ದೇಶಕರ ಕಚೇರಿ, ನಗರ ಕೇಂದ್ರ ಗ್ರಂಥಾಲಯ, ಡಿ.ಸಿ. ಕಚೇರಿಯ ಆವರಣ, ಧಾರವಾಡ ದೂರವಾಣಿ ಸಂಖ್ಯೆ 0836 – 2442465, ಉಪ ನಿರ್ದೇಶಕರ ಕಚೇರಿ, ನಗರ ಕೇಂದ್ರ ಗ್ರಂಥಾಲಯ, ಬಾವುಟಗುಡ್ಡೆ, ಶಂಕರಮಠ ರಸ್ತೆ, ಮಂಗಳೂರು,ದೂರವಾಣಿ ಸಂಖ್ಯೆ 0824–2425873 ಹಾಗೂ ಉಪ ನಿರ್ದೇಶಕರ ಕಚೇರಿ, ನಗರ ಕೇಂದ್ರ ಗ್ರಂಥಾಲಯ, ಎಂ.ಎಚ್.ಎಸ್. ಶಾಲೆ ಆವರಣ, ಸೂಪರ್ ಮಾರ್ಕೆಟ್, ಕಲಬುರಗಿ ದೂರವಾಣಿ ಸಂಖ್ಯೆ 08472–221543. ಆಯಾ ಕಂದಾಯ ವಿಭಾಗಗಳಿಂದ ಪಡೆದು ಅರ್ಜಿಯನ್ನು ಸಲ್ಲಿಸಬಹುದಾಗಿದೆ

ಎಸ್‌ಎಂ:ಜೆಡಿ:ಜಿಪಿಆರ್.

## ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ವಾರ್ತಾ ಇಲಾಖೆಯಲ್ಲಿನ 10 ವಾರ್ತಾ ಸಹಾಯಕ ಹುದ್ದೆಗಳಿಗೆ ಹೆಚ್ಚುವರಿ ಆಯ್ಕೆಪಟ್ಟಿಯನ್ನು ಮತ್ತು ಸಹಕಾರ ಇಲಾಖೆಯಲ್ಲಿನ ಸಹಕಾರ ಸಂಘಗಳ ನಿರೀಕ್ಷಕರ 50 ಹುದ್ದೆಗಳಿಗೆ ಹೆಚ್ಚುವರಿ ಆಯ್ಕೆಪಟ್ಟಿಯನ್ನು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದಲ್ಲಿನ 11 ಸಹಾಯಕ ವ್ಯವಸ್ಥಾಪಕರು, 30 ಗುಣಮಟ್ಟ ಪರಿವೀಕ್ಷಕರು ಮತ್ತು 35 ಹಿರಿಯ ಸಹಾಯಕರು (ಲೆಕ್ಕಪತರ)

ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ನವೆಂಬರ್ 11 ರಂದು ಆಯೋಗದ ವೆಬ್‌ಸೈಟ್ ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# <u>ಅಂತಿಮ ದಿನಾಂಕ ಮುಂದೂಡಿಕೆ</u>

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರದ ಪ್ರವಾಸೋದ್ಯಮ ಇಲಾಖೆಯು ಕರ್ನಾಟಕದಲ್ಲಿರುವ ಹೋಂಸ್ಟೇಗಳನ್ನು ಆನ್‌ಲೈನ್ ನೋಂದಣಿ ಮಾಡಿಸಲು ಸಾಧ್ಯವಾಗುವಂತೆ ಹೊಸದಾಗಿ www.karnatakatourism.org. ಆನ್‌ಲೈನ್ ಪೋರ್ಟಲ್ ಅನಾವರಣಗೊಳಿಸಿದ್ದು ರಾಜ್ಯದಲ್ಲಿನ ಹೋಂಸ್ಟೇಗಳ ನೋಂದಣಿಯ ಅಂತಿಮ ದಿನಾಂಕವನ್ನು ಡಿಸೆಂಬರ್ 1 ರವರೆಗೆ ವಿಸ್ತರಿಸಲಾಗಿದೆ.

ಡಿಸೆಂಬರ್ 1 ರೊಳಗೆ ಹೋಂಸ್ಟೇ ನೋಂದಣಿ ಮಾಡಿಸದೇ ಚಾಲನೆ ಮಾಡುವ ಮಾಲೀಕರನ್ನು ಕಾನೂನು ವ್ಯಾಪ್ತಿಗೆ ಒಳಪಡಿಸಲು ಸೂಕ್ತಕ್ರಮ ಕೈಗೊಳ್ಳಲಾಗುವುದು. ಇದರಿಂದ ರಾಜ್ಯದಲ್ಲಿ ಪ್ರವಾಸಿಗರಿಗೆ ಉತ್ತಮ, ಸುರಕ್ಷಿತ ಹೋಂಸ್ಟೇ ವಾತಾವರಣ ನಿರ್ಮಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ ಎಂದು ಪ್ರವಾಸೋದ್ಯಮ ಇಲಾಖೆ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## EXTENSION OF TIME TO REGISTER HOMESTAYS

Bengaluru, Nov 15 (Karnataka Information)

Department of Tourism has created a portal to register Home stays and the portal is available on the website www.karnatakatourism.org.

Department of Tourism has extended the time for registration of Home stays till 01.12.2016 and the date will not be extended any further.

Home stays which do not register by 01-12-2016, but continue to operate, will be treated as illegal and legal action will be initiated. Therefore it is once again requested that, all the Home stay owners to register their Home stays before 01-12-2016 and co-operate with the Government, says a press release from Tourism Department.

sm/jd/gpr.

## ಸ್ಪರ್ಧಾತ್ಮಕ ಪರೀಕ್ಷೆ – ಕೀ ಉತ್ತರ ಪ್ರಕಟ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ವಿವಿಧ ಗ್ರೂಪ್ 'ಎ' ಮತ್ತು 'ಬಿ' ತಾಂತ್ರಿಕ ಹಾಗೂ ಗ್ರೂಪ್ 'ಸಿ' ತಾಂತ್ರಿಕ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಒಟ್ಟು 6559 ಅಭ್ಯರ್ಥಿಗಳಿಗೆ ಕೆಲವು ಹುದ್ದೆಗಳಿಗಾಗಿ ನಡೆಸಲಾಗಿದ್ದ ನಿರ್ದಿಷ್ಟ ಪತ್ರಿಕೆಗಳ ಸ್ಪರ್ಧಾತ್ಮಕ ಪರೀಕ್ಷೆಯ ಕೀ ಉತ್ತರಗಳನ್ನು ಆಯೋಗದ ಅಂತರ್ಜಾಲದಲ್ಲಿ "http://kpsc.kar.nic.in/Key Answers" ನಲ್ಲಿ ಪ್ರಕಟಿಸಿದೆ.

ಈ ಕೀ ಉತ್ತರಗಳ ಕುರಿತು ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಅದನ್ನು ಪುಷ್ಠೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ವಿಷಯ, ಪ್ರಶ್ನೆ ಪುಸ್ತಿಕೆಯ ಶ್ರೇಣಿ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಗಳು ಹಾಗೂ ಪ್ರತಿ ಪ್ರಶ್ನೆಗೆ ರೂ 50/– ಶುಲ್ಕದೊಂದಿಗೆ (ಐಪಿಓ/ಡಿಡಿ ಮೂಲಕ) ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ದಿನಾಂಕ: 19–11–2016

ರ ಒಳಗಾಗಿ ಸಲ್ಲಿಸಬಹುದಾಗಿದೆ. 19-11-2016 ರ ನಂತರ ಬರುವ ಆಕ್ಷೇಪಣೆಗಳನ್ನು ಪರಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಐಚ್ಛಿಕ ವಿಷಯದ ಆಯ್ಕೆ ಆನ್‌ಲೈನ್ ಮೂಲಕ ಸಲ್ಲಿಸಲು ಸೂಚನೆ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದಲ್ಲಿನ ಸಹಾಯಕ ಸಾಂಖ್ಯಿಕ ಅಧಿಕಾರಿ ಮತ್ತು ಸಹಾಯಕರ ನಿರ್ದೇಶಕರ ಹುದ್ದೆಗೆ ಇದೇ ಡಿಸೆಂಬರ್ 10 ರಂದು ನಡೆಸಲಿರುವ ಸ್ಪರ್ಧಾತ್ಮಕ ಪರೀಕ್ಷೆಯ ನಿರ್ದಿಷ್ಟ ಪತ್ರಿಕೆಗೆ ಪ್ರಕಟಿಸಿದ ನಾಲ್ಕು ವಿಷಯಗಳ ಪಠ್ಯಕ್ರಮಗಳ ಪೈಕಿ ಅಭ್ಯರ್ಥಿಗಳು ಇಚ್ಛಿಸುವ ಒಂದು ವಿಷಯದ ಆಯ್ಕೆಯನ್ನು ಆಯೋಗದ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ನವೆಂಬರ್ 24 ರೊಳಗೆ ಸಲ್ಲಿಸುವಂತೆ ಸೂಚಿಸಿದೆ.

ತಪ್ಪಿದಲ್ಲಿ ಈ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ನಿರ್ದಿಷ್ಟ ಪತ್ರಿಕೆಗೆ ಲಭ್ಯವಿರುವ ಪಠ್ಯಕ್ರಮಗಳ ಅನುಸಾರ ವಿಷಯವನ್ನು ನಿರ್ಧರಿಸಿ ಆಯೋಗವೇ ಅಂತಿಮ ತೀರ್ಮಾನ ಕೈಗೊಳ್ಳುತ್ತದೆ. ಅಲ್ಲದೆ, ಮುಂದೆ ಪಠ್ಯಕ್ರಮದ ವಿಷಯ ಬದಲಾವಣೆಗೆ ಸಂಬಂಧಿಸಿದಂತೆ ಯಾವುದೇ ಅವಕಾಶವಿರುವುದಿಲ್ಲವೆಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.